*ಅ) ಇದರಿಂದ ಸಾರ್ವಜನಿಕರಿಗೆ ಶಾಸಕರುಗಳಿಗೆ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

*ಇ) ಈ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮಗಳೇನು?*

ಶ್ರೀ ಜೆ.ಹೆಚ್. ಪಟೇಲ್ (ಮುಖ್ಯಮಂತ್ರಿಗಳು) :

ಅ) ದೂರವಾಣಿ ಕರೆಗಳ ಬಿಲ್ಲಿನ ಬಾಕಿ ಮೊತ್ತವನ್ನು ದೂರವಾಣಿ ಇಲಾಖೆಗೆ ಪಾವತಿಸದೇ ಇರುವುದರಿಂದ ಸಂಪರ್ಕ ಕಡಿತಗೊಳಿಸಲಾಗಿದೆ.

ಆ) ಬಂದಿದೆ.

ಇ) ಪೌರಾಡಳಿತ ನಿರ್ದೇಶನಾಲಯಕ್ಕೆ 1997-98ನೇ ಸಾಲಿನಲ್ಲಿ ಪ್ರಯಾಣ ವೆಚ್ಚಗಾಗಿ ಕಾಯ್ದಿರಿಸಿದ ಮೊತ್ತದಲ್ಲಿ ರೂ. 2.00 ಲಕ್ಷಗಳನ್ನು ಪೌರಾಡಳಿತ ನಿರ್ದೇಶನಾಲಯದ ಕಛೇರಿ ವೆಚ್ಚಕ್ಕೆ ಉಪಯೋಗಿಸಿಕೊಳ್ಳಲು ಸದರಿ ಲೆಕ್ಕ ಶೀರ್ಷಿಕೆಗೆ ಪುನಃ ವಿನಿಯೋಗ ಮಾಡಿಕೊಳ್ಳಲು ಸರ್ಕಾರದ ಮಂಜೂರಾತಿ ನೀಡಿದೆ. ಪೌರಾಡಳಿತ ನಿರ್ದೇಶನಾಲಯವು ಈಗಾಗಲೇ ಬಾಕಿ ಇರುವ ದೂರವಾಣಿ ಬಿಲ್ಲು ಪಾವತಿಸಲು ಕ್ರಮ ಕೈಗೊಳ್ಳಲಾಗಿದೆ.

## ಪರಿಶಿಷ್ಟ ಜಾತಿ ಹಾಗೂ ಪಂಗಡಗಳ ವಿದ್ಯಾರ್ಥಿಗಳಿಗಾಗಿ ವಿದ್ಯಾರ್ಥನಿಲಯಗಳು

703 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. *1998-99ನೇ ಸಾಲಿನಲ್ಲಿ ಎಷ್ಟು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿ ನಿಲಯವನ್ನು ತೆರೆಯುವ ಗುರಿ ಸರ್ಕಾರದಲ್ಲಿದೆ?*
2. *ಇದಕ್ಕೆ ನಿಗದಿಪಡಿಸಿರುವ ಮೊತ್ತವೆಷ್ಟು?*
3. *1998-99ನೇ ಸಾಲಿನಲ್ಲಿಯೇ ಎಲ್ಲಾ ವಿದ್ಯಾರ್ಥಿ ನಿಲಯಗಳ ಕಾಮಗಾರಿಗಳನ್ನು ಮುಗಿಸಲಾಗುವುದೇ?*

ಶ್ರೀ ಕೆ.ಎಂ. ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು) :

1) 1998-99ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖಾ ವತಿಯಿಂದ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಒಟ್ಟು 25 ಸರ್ಕಾರಿ ಮೆಟ್ರಿಕ್‌ಪೂರ್ವ ಹಾಗೂ 25 ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳನ್ನು ತೆಗೆಯುವ ಗುರಿ ಸರ್ಕಾರದಲ್ಲಿದೆ.

2. ಈ ವಿದ್ಯಾರ್ಥಿನಿಲಯಗಳ ಪ್ರಾರಂಭ ಹಾಗೂ ಸುಧಾರಣೆ ಬಗ್ಗೆ ಆಯವ್ಯಯದಲ್ಲಿ ಒಟ್ಟು ರೂ. 325.00 ಲಕ್ಷ ಹಣವನ್ನು ಒದಗಿಸಿಕೊಳ್ಳಲಾಗಿದೆ.

3. ಸಾಮಾನ್ಯವಾಗಿ ವಿದ್ಯಾರ್ಥನಿಲಯದ ಕಟ್ಟಡ ನಿರ್ಮಾಣದ ಕಾಮಗಾರಿಯನ್ನು ಪೂರ್ಣಗೊಳಿಸಲು ಎರಡು ವರ್ಷಗಳು ಬೇಕಾಗುವುದು. ಆದುದರಿಂದ ಎಲ್ಲಾ ವಿದ್ಯಾರ್ಥಿನಿಲಯಗಳ ಕಾಮಗಾರಿಗಳನ್ನು 1998-99ನೇ ಸಾಲಿನಲ್ಲಿ ಮುಗಿಸಲಾಗುವುದಿಲ್ಲ.

**ಚಿಕ್ಕಮಗಳೂರು ನಗರ ಹಾಗೂ ಇತರ ಭಾಗಗಳ ಅತಿವೃಷ್ಟಿ ಪರಿಹಾರ**

707 - ಶ್ರೀ ಸಿ.ಆರ್. ಸಗೀರ್ ಅಹಮದ್ (ಚಿಕ್ಕಮಗಳೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಚಿಕ್ಕಮಗಳೂರು ನಗರ ಹಾಗೂ ಇತರೆ ಭಾಗಗಳಲ್ಲಿ 1997ನೇ ಸಾಲಿನ ಸೆಪ್ಟೆಂಬರ್ ಮತ್ತು ಅಕ್ಟೋಬರ್ ಮಾಹೆಯಲ್ಲಿ ಬಂದಂತಹ ಭಾರಿ ಮಳೆಯಿಂದ ಸಾರ್ವಜನಿಕ ಆಸ್ತಿ ಪಾಸ್ತಿ ಹಾನಿಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

*ಆ) ಹಾನಿಯಾಗಿರುವ ಬಗ್ಗೆ ಅಂದಾಜು ಮಾಡಲಾಗಿದೆಯೇ?*

*ಇ) ಪರಿಹಾರ ಕಾಮಗಾರಿಗಳಿಗೆ ಸರ್ಕಾರ ಇಲ್ಲಿಯವರೆಗೆ ಎಷ್ಟು ಹಣ ಬಿಡುಗಡೆ ಮಾಡಿದೆ?*

*ಈ) ಬೇಡಿಕೆಯಂತೆ ಸರ್ಕಾರ ಹಣ ಬಿಡುಗಡೆ ಮಾಡಲು ಒಪ್ಪಿದೆಯೇ?*

ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) :

ಅ) ಹೌದು.

ಆ) ಹೌದು.

ಇ) ಪರಿಹಾರ ಕಾರ್ಯಗಳಿಗಾಗಿ ಸರ್ಕಾರವು ಇಲ್ಲಿಯವರೆಗೆ ರೂ. 75.00 ಲಕ್ಷಗಳನ್ನು ಬಿಡುಗಡೆ ಮಾಡಿದೆ.

ಈ) ಲಭ್ಯವಿರುವ ಅನುದಾನ ಮತ್ತು ಋತುಮಾನ ಸ್ಥಿತಿಯನ್ನು ಗಮನದಲ್ಲಿರಿಸಿಕೊಂಡು ಸರ್ಕಾರವು ಹಣ ಬಿಡುಗಡೆ ಮಾಡುತ್ತದೆ.

**ಚಿಕ್ಕಮಗಳೂರು ನಗರಸಭೆಗೆ ವಿಶೇಷ ಅನುದಾನ ಬಿಡುಗಡೆ**

708 - ಶ್ರೀ ಸಿ.ಆರ್. ಸಗೀರ್ ಅಹಮದ್ (ಚಿಕ್ಕಮಗಳೂರು) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಚಿಕ್ಕಮಗಳೂರು ನಗರಸಭೆಗೆ ವಿಶೇಷ ಅನುದಾನ ಬಿಡುಗಡೆ ಮಾಡಲು ನಗರಸಭೆ ವತಿಯಿಂದ ಸರ್ಕಾರಕ್ಕೆ ಕೋರಿಕೆ ಬಂದಿದೆಯೇ? (ರಾಜ್ಯದಲ್ಲಿ ಬೇರೆ ಬೇರೆ ನಗರಸಭೆ ಹಾಗೂ ಪುರಸಭೆಗಳಿಗೆ ವಿಶೇಷ ಅನುದಾನ ಬಿಡುಗಡೆ ಮಾಡಿರುವ ಬಗ್ಗೆ ಜಿಲ್ಲಾವಾರು ಮಾಹಿತಿ ನೀಡುವುದು)*